**Akashvani : Bangalore**
**Regional Bulletin In Kannada**
**10.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**10.01.2025 /** **18.40 hrs**

**<><*<><>*><>**

ಮುಖ್ಯಾಂಶಗಳು

**೧. ರಾಜ್ಯವನ್ನು ಕೌಶಲ್ಯಾಭಿವೃದ್ಧಿ ಕೇಂದ್ರವನ್ನಾಗಿಸುವುದು ಸರ್ಕಾರದ ಗುರಿ- ಸಚಿವ ಶರಣಪ್ರಕಾಶ್ ಪಾಟೀಲ್ ಘೋಷಣೆ**

**೨. ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಕಳೆದ ವರ್ಷ ೪ ಕೋಟಿ ಮಂದಿ ಪ್ರಯಾಣ**

**೩. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತಿಯ ಪಿಯುಸಿ ಪರೀಕ್ಷಾ ವೇಳಾಪಟ್ಟಿ ಪ್ರಕಟ**

**೪. ಹನ್ನೊಂದು ಜಿಲ್ಲೆಗಳಲ್ಲಿ ಬೆಂಬಲಬೆಲೆ ಶೇಂಗಾ ಖರೀದಿ ಅವಧಿ ವಿಸ್ತರಣೆ- ಸಚಿವ ಶಿವಾನಂದ ಪಾಟೀಲ್**

**<><*<><>*><>**

ರಾಜ್ಯದಲ್ಲಿ ಉದ್ಯೋಗ ಸೃಷ್ಟಿಯೊಂದಿಗೆ ಯುವ ಸಮುದಾಯದವರಲ್ಲಿ ಕೌಶಲ್ಯಾಭಿವೃದ್ಧಿಗೂ ವ್ಯವಸ್ಥಿತ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಗ್ರಾಮೀಣ ಮಹಿಳೆಯರು, ವಿದ್ಯಾರ್ಥಿಗಳಿಗೆ, ಕೌಶಲ್ಯ ತರಬೇತಿ ನೀಡುವ ನಿಟ್ಟಿನಲ್ಲಿ ಕೈಗಾರಿಕೆ-ಶೈಕ್ಷಣಿಕಾ ಸಮಾವೇಶ ಆಯೋಜಿಸಲಾಗಿದೆ. ಉದ್ಯೋಗ ಕ್ಷೇತ್ರದ ಬೇಡಿಕೆಗಳನ್ನು ಪೂರೈಸಲು ಸಹಯೋಗ, ಸಹಭಾಗಿತ್ವ, ನಾವೀನ್ಯತೆ ಮತ್ತು ಕೌಶಲ್ಯಾಭಿವೃದ್ಧಿಯ ಉತ್ತೇಜನಕ್ಕೆ ಆದ್ಯತೆ ನೀಡಲಾಗುವುದು. ರಾಜ್ಯವನ್ನು ಕೌಶಲ್ಯಾಭಿವೃದ್ಧಿ ಕೇಂದ್ರವನ್ನಾಗಿಸುವುದೇ ಸರ್ಕಾರದ ಧ್ಯೇಯವಾಗಿದೆ ಎಂದು ಹೇಳಿದರು. ಕೈಗಾರಿಕಾ ವಲಯದಲ್ಲಿ ಕುಶಲ ಉದ್ಯೋಗಿಗಳ ಅಗತ್ಯ ಪೂರೈಸಲು ಬಳ್ಳಾರಿ ಜಿಲ್ಲೆ ಸಂಡೂರಿನಲ್ಲಿ ೩೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕೌಶಲ್ಯ ಅಕಾಡೆಮಿ ಸ್ಥಾಪಿಸಲಾಗುವುದು. ಕಲಬುರಗಿ, ಕೊಪ್ಪಳ ಜಿಲ್ಲೆಯ ತಲಕಲ್ ಮತ್ತು ಮೈಸೂರು ಜಿಲ್ಲೆಯ ವರುಣಾದಲ್ಲಿ ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಅವರು ತಿಳಿಸಿದರು. ಮುಂಬರು 'ಭಾರತ ಕೌಶಲ್ಯ-೨೦೨೫' ಸ್ಪರ್ಧೆಗಳು ಮತ್ತು 'ವಿಶ್ವಕೌಶಲ್ಯ ಸ್ಪರ್ಧೆ-೨೦೨೬' ರ ೧೮ ವಿಭಾಗಗಳಲ್ಲಿ ಭಾವಹಿಸಲು

ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ ಎಂದು ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದರು.

**<><*<><>*><>**

ಮೈಸೂರು ನಗರ ಹಾಗೂ ಹೊಸದಾಗಿ ನಿರ್ಮಿಸಲಾಗಿರುವ ಬಡಾವಣೆಗಳಲ್ಲಿ ಒಳಚರಂಡಿ ನಿರ್ಮಾಣ, ಕೊಳಚೆ ನೀರು ಸಂಸ್ಕರಣೆ ಯೋಜನೆ ಜಾರಿಗೆ ೬೭೦ ಕೋಟಿ ರೂಪಾಯಿ ಡಿಪಿಆರ್ ಸಿದ್ಧಪಡಿಸಲಾಗಿದ್ದು, ಅದನ್ನು ಸಂಪುಟದ ಮುಂದೆ ಮಂಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ತಮ್ಮ ಗೃಹ ಕಚೇರಿಯಲ್ಲಿಂದು ನಡೆದ ಮೈಸೂರು ಅಭಿವೃದ್ಧಿ ಕುರಿತ ಸಭೆಯಲ್ಲಿ, ಮೈಸೂರಿನ ಖಾಸಗಿ ಬಡಾವಣೆಗಳಲ್ಲಿ ಮೂಲಸೌಕರ್ಯಗಳ ಕೊರತೆ, ಕಳಪೆ ನಿರ್ವಹಣೆ, ನೀರು-ಒಳಚರಂಡಿ ವ್ಯವಸ್ಥೆ ಸರಿಯಾಗಿಲ್ಲದ ಬಗ್ಗೆ ಅಧಿಕಾರಿಗಳು ಮುಖ್ಯಮಂತ್ರಿಗಳ ಗಮನ ಸೆಳೆದರು. ಇಂತಹ ಸಮಸ್ಯೆಗಳ ಬಗ್ಗೆ ಚರ್ಚಿಸಲು ನಗರ ಪಾಲಿಕೆ ಮತ್ತು ಮುಡಾ ಅಧಿಕಾರಿಗಳ ಪ್ರತ್ಯೇಕ ಸಭೆ ಕರೆಯುವಂತೆ ಮುಖ್ಯಮಂತ್ರಿ ಸೂಚಿಸಿದರು. ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಯೋಜನೆ ವಿಳಂಬಕ್ಕೆ ಅಧಿಕಾರಿಗಳಿಂದ ಮುಖ್ಯಮಂತ್ರಿ ಮಾಹಿತಿ ಪಡೆದರು. ಈ ಬಗ್ಗೆ ಕೇಂದ್ರದ ಸಚಿವರಿಗೆ ವಿವರವಾದ ಪತ್ರ ಬರೆಯಬೇಕು. ಯೋಜನೆಯ ತ್ವರಿತ ಅನುಷ್ಠಾನ ಕುರಿತಂತೆ ಇದೇ ೧೫ರಂದು ಕೇಂದ್ರ ವಿಮಾನಯಾನ ಸಚಿವರೊಂದಿಗೆ ಮಾತುಕತೆ ನಡೆಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.

**<><*<><>*><>**

೨೦೨೪ನೇ ಇಸವಿಯಲ್ಲಿ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ದಾಖಲೆಯ ೪ ಕೋಟಿ ತಲುಪಿದೆ. ಕಳೆದ ವರ್ಷ ಅಕ್ಟೋಬರ್ ೨೦ ರಂದು ಒಂದೇ ದಿನ ಬೆಂಗಳೂರು ವಿಮಾನ ನಿಲ್ದಾಣದಿಂದ ೧ ಲಕ್ಷ ೨೬ ಸಾವಿರದ ೫೩೨ ಪ್ರಯಾಣಿಕರು ತೆರಳಿದ್ದಾರೆ ಎಂದು ಮಾಹಿತಿ ನೀಡಲಾಗಿದೆ. ಬೆಂಗಳೂರು ವಿಮಾನ ನಿಲ್ದಾಣದ ಮೂಲಕ ವಾರ್ಷಿಕ ಸರಕು ಸಾಗಾಟ ಪ್ರಮಾಣ ೪ ಲಕ್ಷ ೯೬ ಸಾವಿರದ ೨೨೭ ಮೆಟ್ರಿಕ್ ಟನ್ ತಲುಪುವ ಮೂಲಕ ಗರಿಷ್ಠ ದಾಖಲೆ ನಿರ್ಮಾಣವಾಗಿದೆ. ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮೂಲಕ ೭೫ ದೇಶೀಯ ಮತ್ತು ೩೦ ಅಂತಾರಾಷ್ಟ್ರೀಯ ಸ್ಥಳಗಳಿಗೆ ವಿಮಾನ ಸೇವೆಯನ್ನು ಒದಗಿಸಲಾಗುತ್ತಿದೆ. ಹಲವು ಜಾಗತಿಕ ವಿಮಾನಯಾನ ಸಂಸ್ಥೆಗಳೊಂದಿಗೆ ಸಹಯೋಗವನ್ನು ಹೆಚ್ಚಿಸಿಕೊಳ್ಳಲಾಗಿದೆ. ಸರಕು ಸಾಗಾಟ ವಿಭಾಗದಲ್ಲಿ ಬೆಂಗಳೂರು ವಿಮಾನ ನಿಲ್ದಾಣದಿಂದ ೨೦೨೪ರಲ್ಲಿ ದಾಖಲೆ ಪ್ರಮಾಣದಲ್ಲಿ ಗುಲಾಬಿ ಹೂವು, ಮಾವಿನ ಹಣ್ಣು ರಫ್ತು ಮಾಡಲಾಗಿದೆ ಎಂದು ಬೆಂಗಳೂರು ಕಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

'ಅಕ್ರಮ-ಸಕ್ರಮ ಬಗರ್ ಹುಕುಂ' ಯೋಜನೆಯಡಿಯಲ್ಲಿ ಅರ್ಜಿದಾರರು ಮೃತಪಟ್ಟಿದ್ದಲ್ಲಿ ಅರ್ಹ ಕುಟುಂಬಸ್ಥರಿಗೆ ಕಾನೂನು ಪ್ರಕಾರ ಜಮೀನು ಮಂಜೂರು ಮಾಡಿ ಡಿಜಿಟಲ್ ಸಾಗುವಳಿ ಚೀಟಿ ನೀಡಬೇಕು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ, ರಾಜ್ಯದ ಎಲ್ಲ ತಹಶೀಲ್ದಾರ್ ಹಾಗೂ ಎ.ಡಿ.ಎಲ್.ಆರ್ ಗಳಿಗೆ ಸೂಚಿಸಿದ್ದಾರೆ. ವಿಕಾಸಸೌಧದಲ್ಲಿಂದು ಅಧಿಕಾರಿಗಳೊಂದಿಗೆ ವೀಡಿಯೋ ಕಾನ್ಫರೆನ್ಸ್ ನಡೆಸಿದ ಸಚಿವರು, ಸಮಾಜದ ಕಟ್ಟಕಡೆಯ ಮಟ್ಟದಲ್ಲಿ ಬದುಕುತ್ತಿರುವವರಿಗೆ ಮಾಹಿತಿಯ ಕೊರತೆ ಇರುತ್ತದೆ. ಅವರಿಗೆ ಅಧಿಕಾರಿಗಳಿಗೆ ಸ್ವತಃ ಮಾಹಿತಿಯೊಂದಿಗೆ ಸವಲತ್ತುಗಳನ್ನು ಕಲ್ಪಿಸಬೇಕು ಎಂದರು. ರಾಜ್ಯದ ಎಲ್ಲಾ ಜಿಲ್ಲೆ ಹಾಗೂ ತಾಲೂಕುಗಳಲ್ಲಿ 'ಬಗರ್‌ಹುಕುಂ' ಯೋಜನೆಯಡಿ ೫ ಸಾವಿರದ ೭೦೦ ಕ್ಕೂ ಅಧಿಕ ಅರ್ಹ ಫಲಾನುಭವಿಗಳನ್ನು ಗುರುತಿಸಲಾಗಿದೆ. ಸದ್ಯದಲ್ಲೇ ಅವರಿಗೆ ಜಮೀನು ಮಂಜೂರು ಮಾಡಬೇಕು ಎಂದು ತಿಳಿಸಿದರು. ಪೋಡಿ ದುರಸ್ಥಿ ಮುಗಿದಿದ್ದರೂ ಕೆಲವೆಡೆ ತಹಶೀಲ್ದಾರರು, ಸರ್ವೆ ಕೆಲಸ ಆರಂಭಕ್ಕೆ ವಿಳಂಬ ಮಾಡುತ್ತಿದ್ದಾರೆ ಎಂದು ಸಚಿವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ತಕರಾರು ಅರ್ಜಿಗಳ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಆದೇಶ ನೀಡಿದರು.

<><*<><>*><>

೨೦೨೪-೨೫ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತಿಯ ಪಿಯುಸಿ ಪರೀಕ್ಷೆ-೧ರ ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ೨೦೨೫ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-೧, ಮಾರ್ಚ್ ೨೧ ರಂದು ಆರಂಭವಾಗಿ ಏಪ್ರಿಲ್ ೪ ರಂದು ಮುಕ್ತಾಯವಾಗಲಿದೆ. ದ್ವಿತಿಯ ಪಿಯುಸಿ ಪರೀಕ್ಷೆ-೧ ರ ಅಂತಿಮ ವೇಳಾಪಟ್ಟಿಯಂತೆ ಪರೀಕ್ಷೆಗಳು ಮಾರ್ಚ್ ೧ ರಂದು ಆರಂಭವಾಗಿ ಮಾರ್ಚ್ ೨೦ ರಂದು ಮುಕ್ತಾಯವಾಗಲಿದೆ. ಹೆಚ್ಚಿನ ವಿವರಗಳಿಗಾಗಿ ಕರ್ನಾಟಕ ಶಾಲಾ ಮತ್ತು ಮೌಲ್ಯ ನಿರ್ಣಯ ಮಂಡಳಿಯ ವೆಬ್‌ಸೈಟ್ ಅನ್ನು ಸಂಪರ್ಕಿಸಬಹುದು. ರಾಜ್ಯದ ಎಲ್ಲಾ ಪ್ರೌಢಶಾಲಾ ಮುಖ್ಯಸ್ಥರು ಹಾಗೂ ಪದವಿ ಪೂರ್ವಕಾಲೇಜುಗಳ ಪ್ರಾಂಶುಪಾಲರು, ತಮ್ಮ ಶಾಲಾ-ಕಾಲೇಜುಗಳ ಪ್ರಕಟಣಾ ಫಲಕದಲ್ಲಿ ವೇಳಾಪಟ್ಟಿಯನ್ನು ಪ್ರಕಟಿಸಿ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಬೇಕು ಎಂದು ಮಂಡಳಿ ಸೂಚಿಸಿದೆ.

<><*<><>*><>

ಬೆಂಬಲಬೆಲೆ ಯೋಜನೆಯಡಿ ಶೇಂಗಾ ಖರೀದಿ ನೋಂದಣಿ ಮತ್ತು ಖರೀದಿ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಪ್ಪಳ, ಧಾರವಾಡ, ಹಾವೇರಿ, ಬಳ್ಳಾರಿ, ಚಿತ್ರದುರ್ಗಾ, ಗದಗ್, ಬಾಗಲಕೋಟೆ, ದಾವಣಗೆರೆ, ರಾಯಚೂರು,

ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಬೆಂಬಲಬೆಲೆಯಡಿ ಶೇಂಗಾ ಖರೀದಿ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದರು. ಪ್ರಸ್ತುತ, ನೋಂದಣಿ ಅವಧಿಯನ್ನು ಈ ತಿಂಗಳ ೨೦ರವರೆಗೆ ಹಾಗೂ ಖರೀದಿ ಅವಧಿಯನ್ನು ಈ ತಿಂಗಳ ೨೨ರವರೆಗೆ ವಿಸ್ತರಿಸಲಾಗಿದೆ. ಶೇಂಗಾ ಬೆಲೆಯನ್ನು ಕ್ವಿಂಟಲ್‌ಗೆ ೭ ಸಾವಿರದ ೨೬೩ ರೂಪಾಯಿ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು. ಶೇಂಗಾ ಖರೀದಿ ಅವಧಿ ವಿಸ್ತರಣೆಗೆ ಬೇಡಿಕೆ ಬಂದ ಹಿನ್ನಲೆಯಲ್ಲಿ ಈ ತಿಂಗಳ ೨೨ರವರೆಗೆ ವಿಸ್ತರಿಸಲಾಗಿದೆ ಎಂದು ಸಚಿವ ಶಿವಾನಂದ ಪಾಟೀಲ್ ತಿಳಿಸಿದರು.

**<><*<><>*><>**

ರಾಜ್ಯದಲ್ಲಿ ಕಾಳುಮೆಣಸು, ಕಾಫಿ, ಅಡಿಕೆ ಇವುಗಳ ಸಂಸ್ಕರಣೆಗಾಗಿ ಚಿಕ್ಕಮಗಳೂರಿನಲ್ಲಿಯೇ ಸಂಸ್ಕರಣಾ ಘಟಕವನ್ನು ಸ್ಥಾಪಿಸಲು ಯೋಜಿಸಲಾಗಿದೆ. ಇದಕ್ಕೆ ಅನುದಾನ ಬಿಡುಗಡೆಗೆ ಕೇಂದ್ರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು ಎಂದು ಉಡುಪಿ-ಚಿಕ್ಕಮಗಳೂರು ಲೋಕಸಭಾ ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿಂದು ಸಭೆಯೊಂದರಲ್ಲಿ ಮಾತನಾಡಿದ ಅವರು, ಉದ್ದೇಶಿತ ಯೋಜನೆಗೆ ಅಂದಾಜು ಎರಡೂವರೆಯಿಂದ ಐದು ಕೋಟಿ ರೂಪಾಯಿ ವೆಚ್ಚ ನಿರೀಕ್ಷಿಸಲಾಗಿದೆ. ಕೇಂದ್ರ ಸರ್ಕಾರದಿಂದ ಶೇಕಡ ೯೦ ರಷ್ಟು ಅನುದಾನ ಪಡೆದು, ಉಳಿದ ಶೇಕಡ ೧೦ ರಷ್ಟು ಅನುದಾನವನ್ನು ಫಲಾನುಭವಿಗಳು ಭರಸಬೇಕಾಗುತ್ತದೆ. ತೋಟಗಾರಿಕಾ ಉತ್ಪನ್ನಗಳ ಸಂಸ್ಕರಣಾ ಘಟಕದೊಂದಿಗೆ ಖಾದಿ, ಗ್ರಾಮ, ತೆಂಗಿನ ನಾರು ಮೊದಲಾದ ಸಾಂಪ್ರದಾಯಿಕ ಕೈಗಾರಿಕೆಗಳು ಈ ಯೋಜನೆಯ ವ್ಯಾಪ್ತಿಗೆ ಬರುತ್ತವೆ ಎಂದು ತಿಳಿಸಿದರು.

**<><*<><>*><>**

ಯಾದಗಿರಿ ಜಿಲ್ಲೆಯ ಶಾಪೂರ್ ತಾಲೂಕಿನ ಗ್ರಾಮಾಂತರ ರಸ್ತೆಗಳ ಸುಧಾರಣೆಯಿಂದ ಜನರ ಜೀವನ ಮಟ್ಟ ಸುಧಾರಿಸುತ್ತದೆ ಮತ್ತು ಸ್ಥಳೀಯರ ಆರ್ಥಿಕ ಬೆಳವಣಿಗೆಯಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪರ್ ಹೇಳಿದ್ದಾರೆ. ಶಾಪೂರ್‌ದಲ್ಲಿಂದು ಎರಡೂವರೆ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ದಿಗ್ಗಿ ಕ್ರಾಸ್‌ನಿಂದ ದಿಗ್ಗಿ ಗ್ರಾಮದವರೆಗಿನ ರಸ್ತೆ ಕಾಮಗಾರಿಯನ್ನು ಪರಿಶೀಲಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ನಗರ ಪ್ರದೇಶಗಳು ಮತ್ತು ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದರು. ಭೀಮರಾಯ ಗುಡಿ ವೃತ್ತದಿಂದ ದಿಗ್ಗಿ ಗ್ರಾಮದವರೆಗೆ ಸಿಸಿ ರಸ್ತೆ, ಚರಂಡಿ ಹಾಗೂ ಸಾಲು ವಿದ್ಯುತ್ ಕಂಬಳಿಗಾಗಿ ಈಗಾಗಲೇ ಒಂದೂವರೆ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ ಮುಕ್ತಾಯದ ಹಂತದಲ್ಲಿದೆ. ರಸ್ತೆ, ಚರಂಡಿ ಕಾಮಗಾರಿ ಪೂರ್ಣಗೊಂಡ ನಂತರ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸಲಾಗುವುದು ಎಂದು ಸಚಿವ ದರ್ಶನಾಪುರ್ ತಿಳಿಸಿದರು.

**<><*<><>*><>**

೭೭ನೇ ಸೇನಾ ದಿನಾಚರಣೆಯ ಅಂಗವಾಗಿ ಭಾರತೀಯ ಸೇನೆ ಬೆಂಗಳೂರಿನಲ್ಲಿ ಇದೇ ೧೫ರಂದು ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿದೆ ಎಂದು ಕರ್ನಾಟಕ ಮತ್ತು ಕೇರಳ ಪ್ರಾಂತ್ಯದ ಸೇನಾ ವಿಭಾಗದ ಕಮಾಂಡಂಟ್ ಅವರಾದ ಮೇಜರ್ ಜನರಲ್ ವಿ.ಟಿ. ಮ್ಯಾಥ್ಯೂ ಆಕಾಶವಾಣಿಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಬೆಳಗ್ಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಅಂದು ಸೇನಾ ಶಸ್ತ್ರಾಸ್ತ್ರಗಳ ಪ್ರದರ್ಶನ, ಭಾರತೀಯ ಸೇನೆಗೆ ಸಂಬಂಧಿಸಿದ ಸಮಗ್ರ ಮಾಹಿತಿ ಹಾಗೂ ರಾಷ್ಟ್ರಭಕ್ತಿಯ ಹಲವು ಕಾರ್ಯಕ್ರಮಗಳು ನಡೆಯಲಿವೆ ಎಂದರು. ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಅವರು ಮನವಿ ಮಾಡಿದರು. ಈ ಕುರಿತು ಕರ್ನಾಟಕ, ಕೇರಳ ಪ್ರಾಂತ್ಯದ ಸೇನಾ ವಿಭಾಗದ ಅಧಿಕಾರಿ ಬ್ರಿಗೇಡಿಯರ್ ವಿ.ಶಾಂತರಾಮ್ ಅವರಿಂದ ಮಾಹಿತಿ.

**ಧ್ವನಿ: ಬ್ರಿಗೇಡಿಯರ್ ವಿ. ಶಾಂತರಾಮ್, ಸೇವಾ ವಿಭಾಗದ ಅಧಿಕಾರಿ**

**<><*<><>*><>**

**ಸಂಕ್ಷಿಪ್ತ ಸುದ್ದಿ..**

೧. ಮಂಡ್ಯ ಜಿಲ್ಲೆಯಲ್ಲಿ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ವೃದ್ಧಿಸುವ ಕಾರ್ಯಾಗಾರ ಇಂದು ನಡೆಯಿತು. ಪರೀಕ್ಷೆಗೆ ಇನ್ನೂ ಸಾಕಷ್ಟು ಕಾಲಾವಕಾಶವಿದ್ದು, ಉತ್ತಮ ಸಿದ್ಧತೆಯೊಂದಿಗೆ ಧೈರ್ಯವಾಗಿ ಪರೀಕ್ಷೆ ಬರೆಯಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಹೇಳಿದರು.